ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ : 24ನೇ ಜುಲೈ, 2019

15. ವನ್ಯ ಜೀವಿ ಸಂತ್ರಸ್ತರ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) :-

570 (618) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವನ್ಯ ಜೀವಿ ಸಂಘರ್ಷದ ಸಂತ್ರಸ್ತರ ಮನವಿಗಳನ್ನು ಸ್ವೀಕರಿಸಿ ಸರ್ಕಾರಕ್ಕೆ ಸಲ್ಲಿಸಲು ಸರ್ಕಾರದ ವತಿಯಿಂದ ಯಾವ ಯಾವ ಸೇವಾ ಸಂಸ್ಥೆಗಳನ್ನು ಗುರುತಿಸಲಾಗಿದೆ ; ಅವುಗಳ ಕೆಲಸಗಳೇನು; ಸಂತ್ರಸ್ತರ ಮನವಿಯನ್ನು ಸರ್ಕಾರ ಸಲ್ಲಿಸಲು ಬ್ರೋಕರ್ಗಳ ಅವಶ್ಯಕತೆ ಇದೆಯೇ ;

(ಆ) ಸ್ವಯಂಸೇವಾ ಸಂಸ್ಥೆಗಳು ಸಂರಕ್ಷಿತ ಅರಣ್ಯದಲ್ಲಿ ಕಾರ್ಯ ಚಟುವಟಿಕೆಗಳನ್ನು ನಡೆಸಲು ಸರ್ಕಾರ ಅನುಮತಿ ನೀಡಿದೆಯೇ; ಇಲ್ಲವಾದಲ್ಲಿ ಅಕ್ರಮವಾಗಿ ಅರಣ್ಯದಲ್ಲಿ ಕಾರ್ಯ ಚಟುವಟಿಕೆಗಳನ್ನು ನಡೆಸುತ್ತಿರುವ ಸಂಸ್ಥೆಗಳ ಮೇಲೆ ಯಾವ ಕ್ರಮ ಕೈಗೊಂಡಿದೆ ;

(ಇ) ನಾಗರಹೊಳೆ ಮತ್ತು ಬಂಡೀಪುರ ಹುಲಿ ಸಂರಕ್ಷಿತ ಅರಣ್ಯದಲ್ಲಿ ಕಾರ್ಯನಿರ್ವಹಿಸತ್ತಿರುವ ಸ್ವಯಂಸೇವಾ ಸಂಸ್ಥೆಗಳು ಸೇವೆಯ ಹೆಸರಿನಲ್ಲಿ ಅರಣ್ಯ ಸಂಪತ್ತನ್ನು ಲೂಟಿ ಹೊಡೆಯುವುದು ಅಥವಾ ವನ್ಯ ಜೀವಿಗಳ ಬೇಟೆ ಮಾಡುತ್ತಿಲ್ಲ ಎಂಬುದಾಗಿ ಸರ್ಕಾರ ರಾಜ್ಯದ ಜನತೆಗೆ ಖಾತರಿ ನೀಡುತ್ತದೆಯೇ ; ಇಲ್ಲವಾದಲ್ಲಿ ಅಂತಹ ಸ್ವಯಂಸೇವಾ ಸಂಸ್ಥೆಗಳನ್ನು ಮೀಸಲು ಅರಣ್ಯದಲ್ಲಿ ಅನಧಿಕೃತವಾಗಿ ಪ್ರವೇಶ ಮಾಡದಂತೆ ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?